ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 330 (2372)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವಿ ಪರಿಸ್ಥಿತಿ ಸಚಿವರು

ವಿಷಯ : ಕೊಡಗು ಜಿಲ್ಲೆಯಲ್ಲಿನ ಪ್ರವಾಸಿ ತಾಣಗಳ ಕುರಿತು

(ಅ) ಕೊಡಗು ಜಿಲ್ಲೆಯಲ್ಲಿ ಎಷ್ಟು ಸ್ಥಳಗಳನ್ನು ಪ್ರವಾಸಿ ತಾಣಗಳಾಗಿ ಗುರುತಿಸಲಾಗಿದೆ: (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಪ್ರವಾಸಿ ತಾಣಗಳಲ್ಲಿ ಅತ್ಯಗತ್ಯವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ;

(ಇ) ಜಿಲ್ಲೆಯ ಸಾಕಷ್ಟು ಪ್ರವಾಸಿ ತಾಣಗಳಲ್ಲಿ ಇನ್ನೂ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಪ್ರತಿಯೊಂದು ಪ್ರವಾಸಿ ತಾಣದಲ್ಲಿ ಇರುವ ಸೌಲಭ್ಯಗಳ ಕೊರತೆಗಳು ಯಾವುವು; ಅವುಗಳನ್ನು ಕಲ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು/ ವಿನಿಯೋಗಿಸುತ್ತಿರುವ ಅನುದಾನದ ವಿವರಗಳೇನು?